# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 995

ಸದಸ್ಯರ ಹೆಸರು : ಶ್ರೀ. ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 14.03.2025

ಉತ್ತರಿಸುವ ಸಚಿವರು : ಕೃಷಿ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೃಷಿ ಇಲಾಖೆ ವತಿಯಿಂದ ರಾಜ್ಯದ ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು ಯಾವುವು; ಸದರಿ ಯೋಜನೆಯಡಿ ರೈತರಿಗೆ ಯಾವ ಯಾವ ಸೌಲಭ್ಯಗಳು ದೊರಕುತ್ತಿವೆ; (ಜಿಲ್ಲಾವಾರು, ಯೋಜನಾವಾರು ಮಾಹಿತಿ ಒದಗಿಸುವುದು).</td><td>ಕೃಷಿ ಇಲಾಖೆ ವತಿಯಿಂದ ವಿವಿಧ ಯೋಜನೆಗಳಡಿ ರಾಜ್ಯದ ರೈತರಿಗೆ ಒದಗಿಸಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ.<br><br>2024-25ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳನ್ನು ಹೊರತು ಪಡಿಸಿ ಉಳಿದ ಯೋಜನೆಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.<br><br>ಅ) ಬೆಳೆ ವೈವಿಧ್ಯತೆ ಕಾರ್ಯಕ್ರಮ: ಈ ಯೋಜನೆಯನ್ನು ಹಾಸನ, ಮೈಸೂರು ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಮಾತ್ರ ಅನುಷ್ಠಾನ ಮಾಡಲಾಗುತ್ತಿದೆ.<br>ಆ) ಆಹಾರ ಮತ್ತು ಪೌಷ್ಠಿಕ ಭದ್ರತೆ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಎಣ್ಣೆಕಾಳು ಯೋಜನೆಗಳಡಿ ಜಿಲ್ಲಾವಾರು ಅನುಷ್ಠಾನ ಕೆಳಕಂಡಂತಿದೆ.
<table>
<tr><th>ಆಹಾರ ಮತ್ತು ಪೌಷ್ಠಿಕ ಭದ್ರತೆ ಹಾಗೂ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಎಣ್ಣೆಕಾಳು ಯೋಜನೆಗಳು</th><th>ಯೋಜನೆಯನ್ನು ಅನುಷ್ಠಾನ ಮಾಡುತ್ತಿರುವ ಜಿಲ್ಲೆಗ</th></tr>
<tr><td>ಅಕ್ಕಿ</td><td>ಬೆಳಗಾವಿ, ದಕ್ಷಿಣ ಕನ್ನಡ, ಹಾವೇರಿ, ಶಿವಮೊಗ್ಗ, ಉಡುಪಿ, ಕನ್ನಡ ಮತ್ತು ಯಾದಗಿರಿ.</td></tr>
<tr><td>ದ್ವಿದಳ ಧಾನ್ಯ</td><td>ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.</td></tr>
<tr><td>ಒರಟು ಧಾನ್ಯ (ಮೆಕ್ಕೆ ಜೋಳ)</td><td>ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಚಿಕ್ಕಬಳ್ಳಾಪುರ, ಚಿತ್ರ ದಾವಣಗೆರೆ, ಹಾಸನ, ಹಾವೇರಿ, ವಿಜಯಪುರ ಮತ್ತು ವಿಜಯನ</td></tr>
<tr><td>ನ್ಯೂಟ್ರಿ ಧಾನ್ಯ</td><td>ಕೊಡಗು, ದಕ್ಷಿಣ ಕನ್ನಡ, ಶಿವಮೊಗ್ಗ, ಉತ್ತರ ಕನ್ನಡ ಮತ್ತು ಜಿಲ್ಲೆಗಳನ್ನು ಹೊರತು ಪಡಿಸಿ, ಇನ್ನುಳಿದ ಎಲ್ಲಾ ಜಿಲ್ಲೆಗಳು</td></tr>
<tr><td>TFRA-ದ್ವಿದಳ ಧಾನ್ಯ</td><td>ಬೆಳಗಾವಿ, ಬಳ್ಳಾರಿ, ಧಾರವಾಡ, ಕಲಬುರಗಿ, ಹಾವೇರಿ, ಕ ಮಂಡ್ಯ, ಮೈಸೂರು, ಶಿವಮೊಗ್ಗ, ಉಡುಪಿ, ಉತ್ತರ ಕನ್ನಡ ಯಾದಗಿರಿ.</td></tr>
<tr><td>ಹತ್ತಿ</td><td>ಬೆಳಗಾವಿ, ದಾವಣಗೆರೆ, ಧಾರವಾಡ, ಕಲಬುರಗಿ, ಹ ರಾಯಚೂರು ಮತ್ತು ಯಾದಗಿರಿ.</td></tr>
<tr><td>ಕಬ್ಬು</td><td>ಬಾಗಲಕೋಟೆ, ಬೆಳಗಾವಿ, ಬೀದರ್, ದಾವಣಗೆರೆ, ಕಲಬುರಗಿ ಮಂಡ್ಯ.</td></tr>
<tr><td>NMEO- ಎಣ್ಣೆ ಕಾಳು</td><td>ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ, ಚಾಮರಾ ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾ ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರಗಿ, ಕೊ ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾ ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ವಿಜಯಪುರ, ವಿಜ ಮತ್ತು ಯಾದಗಿರಿ.</td></tr>
<tr><td>TFRA- ಎಣ್ಣೆ ಕಾಳು</td><td>ಬಳ್ಳಾರಿ, ಹಾವೇರಿ, ಮಂಡ್ಯ, ರಾಯಚೂರು, ಉಡುಪಿ ಯಾದಗಿರಿ.</td></tr>
</table>
ಜಲಾನಯನ ಅಭಿವೃದ್ಧಿ ಇಲಾಖೆಯಿಂದ ವಿವಿಧ ಜಲಾನಯನ ಯೋಜನೆಗಳಡಿ ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳ ವಿವರವನ್ನು ಅನುಬಂಧ -2ರಲ್ಲಿ ಸಲ್ಲಿಸಿದೆ.</td></tr>
</table>

| | | |
|---|---|---|
| ಆ) | 2024-25ನೇ ಸಾಲಿನಲ್ಲಿ ಯಾವ ಯಾವ ಹೊಸ ಮಾದರಿ ಯೋಜನೆಗಳನ್ನು ರೈತರಿಗೆ ಒದಗಿಸಲಾಗುತ್ತದೆ; (ಯೋಜನಾವಾರು ಮಾಹಿತಿ ಒದಗಿಸುವುದು) | 2024-25ನೇ ಸಾಲಿನಲ್ಲಿ ರೈತರಿಗೆ ಒದಗಿಸಲಾಗುತ್ತಿರುವ ಹೊಸ ಯೋಜನೆಗಳ ವಿವರಗಳು ಈ ಕೆಳಕಂಡಂತಿವೆ.<br>1. **ಕರ್ನಾಟಕ ರೈತ ಸಮೃದ್ಧಿ ಯೋಜನೆ:** ಕೃಷಿ ಕ್ಷೇತ್ರವನ್ನು ಸುಸ್ಥಿರ ಹಾಗೂ ಲಾಭದಾಯಕವಾಗಿಸುವುದು ನಮ್ಮ ಸರ್ಕಾರದ ಆಧ್ಯತೆಯ ವಿಷಯವಾಗಿದ್ದು, ಈ ಉದ್ದೇಶದಿಂದ ವಿವಿಧ ರೈತಪರ ಯೋಜನೆಗಳನ್ನು ಒಗ್ಗೂಡಿಸಿ, ಸಮಗ್ರ ಕೃಷಿಯನ್ನು ಉತ್ತೇಜಿಸುವುದು.<br>2. **ಕೃಷಿ ಅಭಿವೃದ್ಧಿ ಪ್ರಾಧಿಕಾರ:** ಕೃಷಿ ಮತ್ತು ಪೂರಕ ಚಟುವಟಿಕೆಗಳ ನೀತಿ ಮತ್ತು ಯೋಜನೆಗಳ ಸಂಯೋಜನೆ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆ ಹಾಗೂ ಮಾನ್ಯ ಕೃಷಿ ಸಚಿವರ ಉಪಾಧ್ಯಕ್ಷತೆಯಲ್ಲಿ ಕೃಷಿ ಅಭಿವೃದ್ಧಿ ಪ್ರಾಧಿಕಾರ ಸಮಿತಿ ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ "ಕೃಷಿ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಕಾರಿ ಸಮಿತಿ" ಗಳನ್ನು ರಚಿಸಲಾಗಿರುತ್ತದೆ.<br>3. **ಸಮುದಾಯ ಬೀಜ ಬ್ಯಾಂಕ್:** 2024-25 ನೇ ಸಾಲಿನ ಘೋಷಣಾ ಕಾರ್ಯಕ್ರಮವಾಗಿದ್ದು, ಕಣ್ಮರೆಯಾಗುತ್ತಿರುವ ಮತ್ತು ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳ ಬೀಜಗಳನ್ನು ಗುರುತಿಸುವುದು, ಸಂಗ್ರಹಿಸುವುದು, ಸಂರಕ್ಷಿಸುವುದು, ಅಭಿವೃದ್ಧಿಪಡಿಸುವ ಮುಖ್ಯ ಉದ್ದೇಶವನ್ನು ಹೊಂದಿರುತ್ತದೆ. ಸದರಿ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ರೂ.500.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.<br>4. **ನಮ್ಮ ಮಿಲ್ಲೆಟ್:** ಈ ಯೋಜನೆಯಡಿಯಲ್ಲಿ ಸಂಸ್ಕರಿಸಿದ ಸಿರಿಧಾನ್ಯಗಳು ಹಾಗೂ ಮೌಲ್ಯವರ್ಧಿತ ಸಿರಿಧಾನ್ಯ ಉತ್ಪನ್ನಗಳನ್ನು ಅಗ್ರಿ-ಟೆಕ್ ಕಂಪನಿಗಳು ಮತ್ತು ರಿಟೇಲ್ ಚೈನ್ಸ್ ಗಳ ಸಹಭಾಗಿತ್ವದೊಂದಿಗೆ ಕೈಗೆಟುಕುವ ದರದಲ್ಲಿ ದೊರಕಿಸಲು ಅನುವು ಮಾಡಿಕೊಡಲಾಗುವುದು. ಸರ್ಕಾರದ ಅನುಮೋದನೆ ದೊರೆತಿದ್ದು, ಪ್ರಾಂತೀಯ ಸಾವಯವ ಸಹಕಾರ ಸಂಘಗಳ ಒಕ್ಕೂಟಗಳು/ರೈತ ಉತ್ಪಾದಕ ಸಂಸ್ಥೆಗಳಿಗೆ ಈಗಾಗಲೇ ಎರಡು ದಿನದ ಎರಡು ಕಾರ್ಯಾಗಾರಗಳನ್ನು ಆಯೋಜಿಸಲಾಗಿರುತ್ತದೆ.<br>5. **ಆರ್.ಕೆ. ಶಾಲಾ ಕೃಷಿ ಕ್ಷೇತ್ರವನ್ನು ಕೃಷಿಗೆ ಸಂಬಂಧಿಸಿದ ತಾಂತ್ರಿಕತೆಗಳನ್ನು ಪಸರಿಸುವ ಜ್ಞಾನ ಕೇಂದ್ರವನ್ನಾಗಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸುವುದು:** ಕೃಷಿ ಜ್ಞಾನ ಪ್ರಸರಣಾ ಕೇಂದ್ರದ ಮೂಲಕ ಯುವ ಪೀಳಿಗೆಯನ್ನು ಕೃಷಿ ಮತ್ತು ಅದರ ಸಂಬಂಧಿತ ಚಟುವಟಿಕೆಗಳತ್ತ ಆಕರ್ಷಿಸುವ ಪ್ರಯತ್ನವಾಗಿರುತ್ತದೆ. ಕೃಷಿ ಜ್ಞಾನ ಪ್ರಸರಣಾ ಕೇಂದ್ರದ ಮೂಲಕ ಕೃಷಿ ಪರಂಪರೆಯನ್ನು ಸಂರಕ್ಷಿಸಲು, ಸಾರ್ವಜನಿಕರಿಗೆ ಕೃಷಿಯ ಬಗ್ಗೆ ಶಿಕ್ಷಣ ನೀಡಲು, ಗ್ರಾಮೀಣ ಆರ್ಥಿಕತೆಯನ್ನು ಪುನರುಜ್ಜೀವನಗೊಳಿಸಲು ಮತ್ತು ಸ್ಥಳೀಯ ಸಮುದಾಯಗಳಿಗೆ ಸಾಮಾಜಿಕ ಪ್ರಯೋಜನಗಳನ್ನು ಒದಗಿಸುವುದು ಉದ್ದೇಶವಾಗಿರುತ್ತದೆ.<br>ಕೃಷಿ ಜ್ಞಾನ ಕೇಂದ್ರದ ಸ್ಥಾಪನೆ ಮಾಡಲು ರೂ.2500.00ಲಕ್ಷ ಅನುದಾನವನ್ನು NABARD ಪ್ರಾಯೋಜಿತ RIDF-30 ಯೋಜನೆಯಲ್ಲಿ fiscal space ಲಭ್ಯತೆಯಿಲ್ಲದ ಕಾರಣ, ಆರ್.ಕೆ. ಶಾಲಾ ಕೃಷಿ ಕ್ಷೇತ್ರ ಅಭಿವೃದ್ಧಿಪಡಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಕುರಿತು ಪರ್ಯಾಯ ಮಾರ್ಗಗಳು ಹಾಗೂ ಅದಕ್ಕೆ ತಗಲುವ ವೆಚ್ಚ ಹಾಗೂ ಅದನ್ನು ಭರಿಸುವ ಅಂತರಿಕ ಸಂಪನ್ಮೂಲಗಳ ಇತ್ಯಾದಿಗಳ ಕುರಿತ ವಿವರದೊಂದಿಗೆ ಪ್ರಸ್ತಾವನೆ ಸಲ್ಲಿಸಲು ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| | | 6. **e-SAP ತಂತ್ರಾಂಶ:** ರೈತರಿಗೆ ಕೀಟ, ರೋಗ ಮತ್ತು ಪೋಷಕಾಂಶ ನಿರ್ವಹಣೆಯ ಸಲಹೆ ನೀಡಲು ರಾಯಚೂರು ಕೃಷಿ ವಿಶ್ವವಿದ್ಯಾಲಯವು ಅಭಿವೃದ್ಧಿಪಡಿಸಿರುವ e-SAP ತಂತ್ರಾಂಶದ ಸೌಲಭ್ಯವನ್ನು ಎಲ್ಲಾ ರೈತರಿಗೆ ಪರಿಚಯಿಸುವುದು. ಪ್ರಸಕ್ತ ಸಾಲಿನ ಫೆಬ್ರುವರಿ ಮಾಹೆಯ ಅಂತ್ಯದ ವರೆಗೆ ರಾಜ್ಯದಲ್ಲಿ 6,30,683 ತಾಂತ್ರಿಕ ಸಲಹೆಗಳನ್ನು 1,64,658 ರೈತರಿಗೆ ಒದಗಿಸಲಾಗಿರುತ್ತದೆ.<br>7. **ಬೆಳೆ ಉತ್ಪಾದಕತೆಯನ್ನು ಮುನ್ಸೂಚಿಸಲು ದತ್ತಾಂಶ ಅಭಿವೃದ್ಧಿ ಪಡಿಸುವುದು:** ಕೃಷಿ ಜಿಯೋಸ್ಪೇಷಿಯಲ್ ದತ್ತಾಂಶ ಅಭಿವೃದ್ಧಿಪಡಿಸುವುದು ಹಾಗೂ ಬೆಳೆ ಉತ್ಪಾದಕತೆ ಮುನ್ಸೂಚನೆ ಮಾಡುವುದು. ಕಾರ್ಯಕ್ರುದಡಿ ಮಾನವ ಸಂಪನ್ಮೂಲ ನೇಮಕ, ಕ್ಷೇತ್ರ ಮಾಹಿತಿಯ ಸಂಗ್ರಹಣೆ.<br>8. **ರೈತ ಉತ್ಪಾದಕ ಸಂಸ್ಥೆಗಳಿಗೆ ಬೆಂಬಲ ನೀಡಲು Agri Accelerator Platform ಮೂಲಕ ಕೃಷಿ ವಲಯದ Start-up ಗಳ ಉತ್ತೇಜನ:** ರೈತ ಉತ್ಪಾದಕ ಸಂಸ್ಥೆಗಳನ್ನು (FPO) ಇನ್ನಷ್ಟು ಸದೃಢ ಮತ್ತು ಸುಸ್ಥಿರವಾಗಿ ಕಾರ್ಯನಿರ್ವಹಿಸಲು ಪೂರಕವಾದ ತರಬೇತಿ, ಮಾರ್ಗದರ್ಶನ ಹಾಗೂ ಬೆಂಬಲ ನೀಡಲು Agri Accelerator Platform ಮೂಲಕ ಕೃಷಿ ವಲಯದ Start-Upಗಳನ್ನು ಉತ್ತೇಜಿಸಲಾಗುವುದು. |
| ಇ) | ಪ್ರಸ್ತುತ ಜಾರಿಯಲ್ಲಿರುವ ಸೌಲಭ್ಯಗಳನ್ನು ಪಡೆಯಲು ರೈತರಿಗೆ ಇರುವ ಮಾನದಂಡಗಳಾವುವು? (ಯೋಜನಾವಾರು ಮಾಹಿತಿ ಒದಗಿಸುವುದು) | ಪ್ರಸ್ತುತ ಜಾರಿಯಲ್ಲಿರುವ ಸೌಲಭ್ಯಗಳನ್ನು ಪಡೆಯಲು ರೈತರಿಗೆ ಇರುವ ಮಾನದಂಡಗಳ ಕುರಿತು ಯೋಜನಾವಾರು ಮಾಹಿತಿಯನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ.<br>ಪ್ರಸ್ತುತ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಡಿ ರೈತರಿಗೆ ಯೋಜನಾ ಸೌಲಭ್ಯ ಒದಗಿಸಲು/ಯೋಜನಾ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳ ಯೋಜನಾವಾರು ಮಾಹಿತಿಯನ್ನು **ಅನುಬಂಧ-2** ಸಲ್ಲಿಸಿದೆ. |

**ಸಂಖ್ಯೆ:** AGRI/101/AML/2025

**(ಎನ್. ಚಲುವರಾಯಸ್ವಾಮಿ)**
**ಕೃಷಿ ಸಚಿವರು**

**LCQ -995**

**ಉಪ ಪ್ರಶ್ನೆ: (ಅ) & (ಇ)**

**ಅನುಬಂಧ-1**

**ಕೃಷಿ ಇಲಾಖೆಯ ವತಿಯಿಂದ ವಿವಿಧ ಯೋಜನೆಗಳಡಿ ರೈತರಿಗೆ ಒದಗಿಸಲಾಗುತ್ತಿರುವ ಸೌಲಭ್ಯಗಳು ಹಾಗೂ ಅವುಗಳನ್ನು ಪಡೆಯಲು ರೈತರಿಗೆ ಇರುವ ಮಾನದಂಡಗಳು**

1. **ಬೀಜಗಳ ಪೂರೈಕೆ:** ಕೃಷಿ ಇಲಾಖೆಯ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ ವಿವಿಧ ಕೃಷಿ ಬೆಳೆಗಳ (ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ) ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50ರವರೆಗೆ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರವರೆಗೆ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ.

2. **ಕೃಷಿ ಯಾಂತ್ರೀಕರಣ:** ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುವುದಕ್ಕೆ ಅನುವು ಮಾಡಿಕೊಡಲು ಹಾಗೂ ಕೂಲಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಈ ಯೋಜನೆಯಡಿ ಕೃಷಿ ಯಂತ್ರೋಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತದೆ ಹಾಗೂ 45 ಪಿ.ಟಿ.ಒ ಹೆಚ್.ಪಿ ವರೆಗಿನ ಟ್ರಾಕ್ಟರ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ.0.75 ಲಕ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

3. **ಕೃಷಿ ಸಂಸ್ಕರಣೆ:** ಈ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳು ಮತ್ತು ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೃಷಿ ಸಂಸ್ಕರಣಾ ಘಟಕಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಹಾಗೂ ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಘಟಕಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.75 ಹಾಗೂ ಪ.ಜಾ./ಪ.ಪಂ., ರೈತರಿಗೆ ಶೇ.90 ರಂತೆ ಎಲ್ಲಾ ವರ್ಗದ ರೈತರಿಗೆ ಗರಿಷ್ಠ ರೂ.1.00 ಲಕ್ಷಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ. ಟಾರ್ಪಾಲಿನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರಷ್ಟು ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರಷ್ಟು ಸಹಾಯಧನವನ್ನು ಒದಗಿಸಲಾಗುತ್ತಿದೆ.

4. **ಹೈಟೆಕ್ ಹಾರ್ವೆಸ್ಟರ್ ಹಬ್**- ಬೆಳೆ ಕಟಾವು ಪ್ರಕ್ರಿಯೆಯನ್ನು ನಿಗದಿತ ಸಮಯದಲ್ಲಿ ಕೈಗೊಳ್ಳಲು ಹಾಗು ಕಟಾವು ಸಮಯದಲ್ಲಿ ಬೆಳೆ ನಷ್ಟವನ್ನು ತಡೆಗಟ್ಟಲು ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಹಂತ ಹಂತವಾಗಿ ಸ್ಥಾಪಿಸಲು ರಾಜ್ಯದಲ್ಲಿ ಪ್ರಚಲಿತವಿರುವ ಕೃಷಿ ಯಂತ್ರಧಾರೆ ಕೇಂದ್ರಗಳು / ರೈತ ಉತ್ಪಾದಕ ಸಂಸ್ಥೆಗಳು / ಸೇವಾದಾರ ಸಂಸ್ಥೆಗಳು/ವೈಯಕ್ತಿಕ ಫಲಾನುಭವಿಗಳನ್ನು ಒಳಗೊಂಡಂತೆ ಅರ್ಹತೆಯಿರುವ ಸಂಸ್ಥೆಗಳನ್ನು / ವೈಯಕ್ತಿಕ ಫಲಾನುಭವಿಗಳನ್ನು ಆಯ್ಕೆ ಮಾಡಿ ಅವಶ್ಯಕತೆಯಿರುವ ಪ್ರದೇಶಗಳಲ್ಲಿ Hi-Tech Harvester Hubs ಗಳನ್ನು ಸ್ಥಾಪಿಸಲಾಗುವುದು. ಸದರಿ ಕೇಂದ್ರಗಳಲ್ಲಿ ದಾಸ್ತಾನೀಕರಿಸುವ Hi-Tech ಕಟಾವು / ಒಕ್ಕಣೆ ಯಂತ್ರಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ರಂತೆ ಗರಿಷ್ಠ ರೂ.40.00 ಲಕ್ಷದವರೆಗೆ, ಪ.ಜ/ಪ.ಪಂ. ವರ್ಗದ ರೈತರಿಗೆ ಹಾಗೂ ಸಂಘ-ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ / FPO ಗಳನ್ನೊಳಗೊಂಡಂತೆ) ಶೇ.70 ರಂತೆ ಗರಿಷ್ಠ ರೂ.50.00 ಲಕ್ಷದವರೆಗೆ ಸಹಾಯಧನವನ್ನು ಒದಗಿಸಲಾಗುತ್ತಿದೆ. ಪ್ರತಿ ಒಂದು ಹೈಟೆಕ್ ಹಾರ್ವೆಸ್ಟರ್ ಹಬ್ ಘಟಕಕ್ಕೆ ಗರಿಷ್ಠ ಮೊತ್ತ ರೂ.100.00 ಲಕ್ಷಗಳು ಮೀರದಂತೆ (ರೂ.5.00 ಲಕ್ಷಗಳ ಆಡಳಿತಾತ್ಮಕ ವೆಚ್ಚ

ಒಳಗೊಂಡಂತೆ) ಸಹಾಯಧನವನ್ನು ಒದಗಿಸಲಾಗುತ್ತಿದೆ. ಸದರಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತಿದೆ.

5. **ಸಸ್ಯ ಸಂರಕ್ಷಣೆ:** ರಾಜ್ಯದಲ್ಲಿ ಕೃಷಿ ಉತ್ತೇಜನಕ್ಕಾಗಿ ರೈತರುಗಳಿಗೆ ಅನುಕೂಲವಾಗುವಂತೆ ಎಲ್ಲಾ ವರ್ಗದ ರೈತರಿಗೆ ಶೇ.50ರ ಸಹಾಯಧನದಡಿ ಪ್ರತಿ ಹೆಕ್ಟೇರ್‌ಗೆ ರೂ.500/- ರಂತೆ ಗರಿಷ್ಠ 2 ಹೆ. ಗೆ ಸೀಮಿತಗೊಳಿಸಿ ಅನುದಾನದ ಲಭ್ಯತೆಗೆ ಅನುಗುಣವಾಗಿ ರೈತ ಸಂಪರ್ಕ ಕೇಂದ್ರಗಳ ಮೂಲಕ ಪೀಡೆನಾಶಕ/ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಕಾರಕಗಳ ವಿತರಣೆ, ಬೀಜೋಪಚಾರ ಆಂದೋಲನ ಹಾಗೂ ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ತರಬೇತಿಗಾಗಿ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ.

6. **ಇ-ಸ್ಯಾಪ್:** ಬೆಳೆಗಳಲ್ಲಿ ಕಂಡುಬರುವ ಕೀಟ/ ರೋಗ ಬಾಧೆ ಹಾಗೂ ಪೋಷಕಾಂಶಗಳ ಕೊರತೆಯನ್ನು ನಿಖರವಾಗಿ ಗುರುತಿಸಿ, ಪೀಡೆ ಬಾಧೆಯ ತೀವ್ರತೆಗನುಗುಣವಾಗಿ ನಿರ್ವಹಣಾ ಕ್ರಮಗಳನ್ನು ರೈತರಿಗೆ ತಲುಪಿಸಲು ರಾಯಚೂರು ಕೃಷಿ ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಿರುವ ವಿನೂತನ ತಂತ್ರಜ್ಞಾನವನ್ನು ರಾಜ್ಯಾದ್ಯಂತ ಇಲಾಖೆಯ ಮೂಲಕ ಅಳವಡಿಸಿಕೊಳ್ಳಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ ಸಾಮಾನ್ಯವಾಗಿ ಹೆಚ್ಚಿನ ಪ್ರದೇಶದಲ್ಲಿ ಬೆಳೆಯುತ್ತಿರುವ 51 ವಿವಿಧ ಕೃಷಿ ಮತ್ತು ತೋಟಗಾರಿಕಾ ಬೆಳೆಗಳಲ್ಲಿ ಕಂಡುಬರುವ 1000 ಕ್ಕೂ ಹೆಚ್ಚು ಕೀಟ/ ರೋಗ ಬಾಧೆ ಹಾಗೂ ಪೋಷಕಾಂಶಗಳ ಕೊರತೆಯ ಗುರುತಿಸುವಿಕೆ ಮತ್ತು ನಿರ್ವಹಣೆಗೆ ವಹಿಸಬೇಕಾದ ಕ್ರಮಗಳ ಮಾಹಿತಿಯನ್ನು ಇ-ಸ್ಯಾಪ್ ತಂತ್ರಾಂಶದಲ್ಲಿ ಅಳವಡಿಸಲಾಗಿರುತ್ತದೆ. ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಂತ್ರಿಕ ಸಿಬ್ಬಂದಿ, ಆತ್ಮ ಯೋಜನೆಯ ತಾಂತ್ರಿಕ ಸಿಬ್ಬಂದಿ ಹಾಗೂ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ತಾಂತ್ರಿಕ ಸಿಬ್ಬಂದಿಯ ಮೂಲಕ ರೈತರ ತಾಕುಗಳಿಗೆ ಬೇಟಿ ನೀಡಿ e-SAP ಮೂಲಕ ಕೀಟ/ರೋಗ ಬಾಧೆ ಹಾಗೂ ಪೋಷಕಾಂಶಗಳ ಕೊರತೆಗಳನ್ನು ನಿಖರವಾಗಿ ಗುರುತಿಸಿ ಕೈಗೊಳ್ಳಬೇಕಾದ ನಿರ್ವಹಣಾ ಕ್ರಮಗಳ ಮಾಹಿತಿಯನ್ನು ಒದಗಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ದಿನಾಂಕ: 28.02.2025 ರವರೆಗೆ ರಾಜ್ಯದಲ್ಲಿ 6,30,683 ತಾಂತ್ರಿಕ ಸಲಹೆಗಳನ್ನು 1,64,658 ರೈತರಿಗೆ ಒದಗಿಸಲಾಗಿರುತ್ತದೆ.

7. **ರೈತ ಸಿರಿ & ಸಿರಿಧಾನ್ಯ ಉತ್ತೇಜನ:** ರೈತ ಸಿರಿ ಕಾರ್ಯಕ್ರಮದಡಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು, ಬರಗು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುತ್ತದೆ.

   ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ ನೀಡುವ ಉದ್ದೇಶದೊಂದಿಗೆ ಸಿರಿಧಾನ್ಯಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಯಂತ್ರೋಪಕರಣಗಳಿಗೆ ಒಟ್ಟು ಯಂತ್ರೋಪಕರಣಗಳ ವೆಚ್ಚದ ಮೇಲೆ ಶೇ.50 ರಷ್ಟು ಅಥವಾ ಗರಿಷ್ಠ ರೂ.10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ.

8. **ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮ:** 2024-25 ನೇ ಸಾಲಿನ ಘೋಷಣಾ ಕಾರ್ಯಕ್ರಮವಾಗಿದ್ದು, ಕಣ್ಮರೆಯಾಗುತ್ತಿರುವ ಮತ್ತು ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳ ಬೀಜಗಳನ್ನು ಗುರುತಿಸುವುದು, ಸಂಗ್ರಹಿಸುವುದು, ಸಂರಕ್ಷಿಸುವುದು, ಅಭಿವೃದ್ಧಿಪಡಿಸುವ ಮುಖ್ಯ ಉದ್ದೇಶವನ್ನು ಹೊಂದಿರುತ್ತದೆ. ಸದರಿ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ರೂ.500.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

**9. ಸಾವಯವ ಇಂಗಾಲ ಅಭಿಯಾನ:** ರಾಜ್ಯದಲ್ಲಿ ಸಾವಯವ ಕೃಷಿ ಉತ್ತೇಜನಕ್ಕಾಗಿ ರೈತರುಗಳಿಗೆ ಅನುಕೂಲವಾಗುವಂತೆ ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಉಪಯುಕ್ತತೆಯ ಬಗ್ಗೆ ರೈತರಿಗೆ ಅರಿವು ಮೂಡಿಸುವ ಸಲುವಾಗಿ ರೈತರ ಜಮೀನಿನಲ್ಲಿ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲು ಫಲಾನುಭವಿ ರೈತರಿಗೆ ಪ್ರತಿ ಹೆಕ್ಟೇರ್ ಗೆ ಗರಿಷ್ಠ ರೂ.2500/- ಸಹಾಯಧನ ನೀಡಲಾಗುತ್ತಿದೆ ಹಾಗೂ ಹಸಿರೆಲೆ ಗೊಬ್ಬರ ಬಳಕೆಯನ್ನು ಪ್ರೋತ್ಸಾಹಿಸಲು ಎಲ್ಲಾ ವರ್ಗದ ರೈತರಿಗೆ ಶೇ.75ರ ರಿಯಾಯಿತಿ ದರದಲ್ಲಿ ಪ್ರಮುಖವಾಗಿ ಡಯಾಂಚಾ ಮತ್ತು ಸನ್ಹೆಂಪ್ ಹಸಿರೆಲೆ ಬೀಜಗಳನ್ನು ವಿತರಣೆ ಮಾಡಲಾಗುತ್ತಿದೆ.

**10. ಹೊಸ ಬೆಳೆ ವಿಮಾ ಯೋಜನೆ:** ಈ ಯೋಜನೆಯಡಿ ಪ್ರವಾಹ, ಅನಾವೃಷ್ಟಿ, ಅಕಾಲಿಕ ಮಳೆ ಮತ್ತು ಇತರೆ ನೈಸರ್ಗಿಕ ವಿಕೋಪಗಳಿಂದ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುತ್ತದೆ. ಸದರಿ ಯೋಜನೆಯಡಿ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ರೈತರು ಆಹಾರ ಮತ್ತು ಎಣ್ಣೆಕಾಳು ಬೆಳೆಗಳಿಗೆ ಮುಂಗಾರು ಹಂಗಾಮಿನಲ್ಲಿ ಶೇ. 2.00 ರಷ್ಟು, ಹಿಂಗಾರು/ಬೇಸಿಗೆ ಹಂಗಾಮಿನಲ್ಲಿ ಶೇ. 1.5 ರಷ್ಟು ಮತ್ತು ವಾರ್ಷಿಕ ವಾಣಿಜ್ಯ ಮತ್ತು ತೋಟಗಾರಿಕಾ ಬೆಳೆಗಳಿಗೆ ಶೇ. 5.00 ರಷ್ಟು ಪ್ರೀಮಿಯಂ ಮೊತ್ತವನ್ನು ಮಾತ್ರ ಪಾವತಿಸಬೇಕಾಗಿರುತ್ತದೆ ಹಾಗೂ ಎಲ್ಲಾ ವರ್ಗದ ರೈತರಿಗೆ ಪ್ರೀಮಿಯಂ ಮೊತ್ತವು ಸಮವಾಗಿರುತ್ತದೆ. ಒಟ್ಟು ವಾಣಿಜ್ಯ ವಿಮಾ ಕಂತಿನ ದರದಲ್ಲಿ ಎಲ್ಲಾ ವರ್ಗದ ರೈತರ ಪ್ರೀಮಿಯಂ ಮೊತ್ತವನ್ನು ಹೊರತುಪಡಿಸಿ ಉಳಿದ ಪ್ರೀಮಿಯಂ ಅನ್ನು ಪ್ರೀಮಿಯಂ ಸಬ್ಸಿಡಿಯಾಗಿ ರೈತರ ಪರವಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ವಿಮಾ ಸಂಸ್ಥೆಯವರಿಗೆ ನೀಡಲಾಗುತ್ತಿದೆ.

**11. ಬೆಳೆ ಸಮೀಕ್ಷೆ:** ಬೆಳೆ ಸಮೀಕ್ಷೆಯು ಫಲಾನುಭವಿ ಆಧಾರಿತ ಯೋಜನೆಯಾಗಿರುವುದಿಲ್ಲ. ರಾಜ್ಯದ ಎಲ್ಲಾ ರೈತರ ತಾಕುಗಳಲ್ಲಿ ಬೆಳೆ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಬೆಳೆ ಸಮೀಕ್ಷೆ ದತ್ತಾಂಶವನ್ನು ಬೆಳೆ ವಿಮೆ, ಬೆಂಬಲ ಬೆಲೆ ಯೋಜನೆ, ಪರಿಹಾರ, ಪಹಣಿಯಲ್ಲಿ ಬೆಳೆ ನಮೂದು, ಬೆಳೆ ಸಾಲ ವಿತರಣೆಗಾಗಿ ಬ್ಯಾಂಕ್ ಗಳಲ್ಲಿ ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಯೋಜನೆಗಳಲ್ಲಿ ಬಳಸಬಹುದಾಗಿದೆ.

**12. ಮುಖ್ಯಮಂತ್ರಿಗಳ ರೈತ ವಿದ್ಯಾನಿಧಿ:** ಎಸ್.ಎಸ್.ಎಲ್.ಸಿ/ 10ನೇ ತರಗತಿಯನ್ನು ಪೂರೈಸಿರುವ ಹಾಗೂ ರಾಜ್ಯದ ಯಾವುದೇ ಭಾಗದಲ್ಲಿ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆ/ ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್ ಗಳವರೆಗೆ ವಿದ್ಯಾಭ್ಯಾಸ ಮಾಡುತ್ತಿರುವ ರೈತರ ಮಕ್ಕಳಿಗೆ ಹಾಗೂ ಪ್ರೌಢಶಾಲಾ ಶಿಕ್ಷಣ ಪಡೆಯುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೆ ಮತ್ತು ಭೂರಹಿತ ಕೃಷಿ ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ ಇತರೆ ಯಾವುದೇ ಇಲಾಖೆಯು ನೀಡುವ ವಿದ್ಯಾರ್ಥಿ ವೇತನ ಪಡೆಯುತ್ತಿರುವ ವಿದ್ಯಾರ್ಥಿಗಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವುದಿಲ್ಲ.

**13. ಕೃಷಿ ಭಾಗ್ಯ:** ಕೃಷಿ ಭಾಗ್ಯ ಯೋಜನೆಯನ್ನು ರಾಜ್ಯಾದ್ಯಂತ (ಎಲ್ಲ ಜಿಲ್ಲೆ/ತಾಲ್ಲೂಕುಗಳು) ವಿಸ್ತರಿಸಲಾಗಿದ್ದು, ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ರಾಜ್ಯದ ಮಳೆಯಾಶ್ರಿತ ಪ್ರದೇಶಗಳಲ್ಲಿ ಹಾಗೂ ಗಣಿಗಾರಿಕೆಯಿಂದ ಭಾದಿತ ಪ್ರದೇಶಗಳಲ್ಲಿ ಸುಸ್ಥಿರ ಕೃಷಿಯನ್ನು ಉತ್ತೇಜಿಸಿ ಬೆಳೆ ಉತ್ಪಾದಕತೆ ಮತ್ತು ರೈತರ ಜೀವನ ಮಟ್ಟವನ್ನು ಸುಧಾರಿಸುವ ಮೂಲಕ ಬರ ಉಪಶಮನದ ಗುರಿ ಹೊಂದಿರುತ್ತದೆ. ರಾಜ್ಯದ ಮಳೆಯಾಶ್ರಿತ ಕೃಷಿಯನ್ನು ಸುಸ್ಥಿರ ಕೃಷಿಯನ್ನಾಗಿ ರೂಪಾಂತರ ಗೊಳಿಸುವುದು, ಸಮರ್ಪಕ ಮಳೆ ನೀರಿನ ಸಂಗ್ರಹಣೆ ಹಾಗೂ ಉಪಯುಕ್ತ ಬಳಕೆ ಪದ್ಧತಿಯಿಂದ ಕೃಷಿ ಉತ್ಪಾದಕತೆಯನ್ನು ಉತ್ತಮ ಪಡಿಸುವುದು ಮತ್ತು ಆದಾಯವನ್ನು ಹೆಚ್ಚಿಸುವುದು. ಮಳೆ ನೀರನ್ನು ವ್ಯರ್ಥ ಮಾಡದೆ ಆಯ್ದ ಸ್ಥಳದಲ್ಲಿ ಕೃಷಿ ಹೊಂಡ ತೆಗೆದು ಜಲ ಸಂಗ್ರಹಿಸಿ, ಬೆಳೆಗಳ ಸಂದಿಗ್ಧ ಹಂತಗಳಲ್ಲಿ ರಕ್ಷಣಾತ್ಮಕ ನೀರಾವರಿ ಒದಗಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಕೃಷಿ ಭಾಗ್ಯ ಯೋಜನೆಯಡಿ ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ (GI Wire

Fencing), ಹೊಂಡದಿಂದ ನೀರು ಎತ್ತಲು ಡೀಸೆಲ್/ಪೆಟ್ರೋಲ್/ಸೋಲಾರ್ ಪಂಪ್ ಸೆಟ್, ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ(ತುಂತುರು/ಹನಿ) ನೀರಾವರಿ ಘಟಕಗಳನ್ನು ಒದಗಿಸಲಾಗುತ್ತಿದೆ. ಈ ಯೋಜನೆಯಡಿ ಎಲ್ಲಾ ಘಟಕಗಳಿಗೆ (ತಂತಿ ಬೇಲಿ ಹೊರತುಪಡಿಸಿ) ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.90 ರಂತೆ ಸಹಾಯಧನವನ್ನು ಒದಗಿಸಲಾಗುತ್ತದೆ (ಷರಾ: ತಂತಿ ಬೇಲಿ ಘಟಕಕ್ಕೆ ಸಾಮಾನ್ಯ ವರ್ಗದ ರೈತರಿಗೆ ಶೇ.40 ಹಾಗೂ ಪ.ಜಾ./ಪ.ಪಂ. ರೈತರಿಗೆ ಶೇ.50 ರಂತೆ ಸಹಾಯಧನ).

14. **ಕೃಷಿ ಭಾಗ್ಯ (SDMF):** ರಾಜ್ಯದಲ್ಲಿ ಬರ ಘೋಷಣೆಯಾದ ಪ್ರದೇಶಗಳಲ್ಲಿ ಕಂದಾಯ ಇಲಾಖೆಯ ರಾಜ್ಯ ವಿಪತ್ತು ಉಪಶಮನ ನಿಧಿ (SDMF) ಅಡಿ ಕೃಷಿ ಭಾಗ್ಯ ಯೋಜನೆಯನ್ನು ಅನುಷ್ಠಾನ ಮಾಡಲು 2024-25 ನೇ ಸಾಲಿನಲ್ಲಿ ರೂ. 100 ಕೋಟಿಗಳ ಅನುದಾನವನ್ನು ಒದಗಿಸಿದ್ದು, ಅದರಂತೆ ರಾಜ್ಯದ 223 ಬರಪೀಡಿತ ತಾಲ್ಲೂಕುಗಳಲ್ಲಿ ಕೃಷಿ ಭಾಗ್ಯ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.

15. **ಸೂಕ್ಷ್ಮ ನೀರಾವರಿ ಯೋಜನೆ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅನುಷ್ಠಾನ ಮಾಡಲಾಗುತ್ತಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಅನುಷ್ಠಾನಕ್ಕೆ ತೋಟಗಾರಿಕೆ ಇಲಾಖೆಯು ನೋಡಲ್ ಇಲಾಖೆಯಾಗಿರುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ಸಣ್ಣ / ಅತಿ ಸಣ್ಣ ರೈತರಿಗೆ ಶೇ.55 ಮತ್ತು ಇತರೇ ವರ್ಗದ ರೈತರಿಗೆ ಶೇ.45 ರಷ್ಟು ಸಹಾಯಧನವನ್ನು ಪ್ರತಿಯೊಬ್ಬ ರೈತರಿಗೆ ಗರಿಷ್ಠ 5.0 ಹೆಕ್ಟೇರ್ ಪ್ರದೇಶದವರೆಗೆ ನೀಡಲು ಅವಕಾಶವಿರುತ್ತದೆ. ರಾಜ್ಯದಲ್ಲಿ, ರಾಜ್ಯ ಸರ್ಕಾರದ ವತಿಯಿಂದ ರಾಜ್ಯದ ಪಾಲಿನ ಹೆಚ್ಚುವರಿ ಪೂರಕ ಸಹಾಯಧನವನ್ನು ಸೇರಿಸಿ ತುಂತುರು ನೀರಾವರಿ ಘಟಕಗಳಿಗೆ ಎಲ್ಲಾ ವರ್ಗದ ರೈತರಿಗೆ 2 ಹೆ ವರೆಗೆ ಶೇ.90 ರಷ್ಟು ಹಾಗೂ ಹನಿ ನೀರಾವರಿ ಘಟಕಗಳಿಗೆ ಸಣ್ಣ /ಅತೀ ಸಣ್ಣ/ಪ.ಜಾತಿ/ಪ.ಪಂಗಡದ ರೈತರಿಗೆ 2 ಹೆ ವರೆಗೆ ಶೇ.90 ರಷ್ಟು ಮತ್ತು ಇನ್ನುಳಿದಂತೆ 5 ಹೆ ಪ್ರದೇಶದವರೆಗೆ ಶೇ.45 ರಷ್ಟು ಸಹಾಯಧನ ಒದಗಿಸಿ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ.

16. **ಆಹಾರ ಮತ್ತು ಪೌಷ್ಠಿಕ ಭದ್ರತೆ (Food and Nutrition Security-FNS)**: ಈ ಯೋಜನೆಯಡಿ ಭತ್ತ, ದ್ವಿದಳಧಾನ್ಯ, TRFA-ದ್ವಿದಳಧಾನ್ಯ, ಒರಟುಧಾನ್ಯ, ನ್ಯೂಟ್ರಿಸಿರಿಧಾನ್ಯ, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಭತ್ತ, ದ್ವಿದಳಧಾನ್ಯ, ನ್ಯೂಟ್ರಿಸಿರಿಧಾನ್ಯ ಮತ್ತು ಒರಟುಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ನೀರು ಒದಗಿಸುವ ಪೈಪುಗಳು ಹಾಗೂ ಕೃಷಿ ಉಪಕರಣಗಳನ್ನು ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಿಗೆ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ನ್ಯೂಟ್ರಿಸಿರಿಧಾನ್ಯಗಳಿಗೆ ರೂ.3000/-ಪ್ರೋತ್ಸಾಹ ಧನ ನೀಡಲಾಗುತ್ತಿದೆ.

17. **ಕೃಷಿ ಯಾಂತ್ರೀಕರಣ ಉಪ ಅಭಿಯಾನ (Sub Mission on Agriculture Mechanisation-SMAM):** ರಾಜ್ಯದಲ್ಲಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು, ಕೃಷಿ ಕಾರ್ಮಿಕರ ಸಮಸ್ಯೆಯನ್ನು ನೀಗಿಸಲು, ಹೆಚ್ಚಿನ ಇಳುವರಿ ಪಡೆಯಲು ನೆರವಾಗುವಂತೆ ಸಹಕಾರಿಯಾಗಲು ಹಾಗೂ ಕ್ಷೇತ್ರ ಶಕ್ತಿಯನ್ನು (ಪ್ರಸ್ತುತವಿರುವ 2.115 KW/ Ha to 2.5kW/Ha by 2023 and 4.00kW/ha by 2030) ಹೆಚ್ಚಿಸಲು ಕೃಷಿ ಯಾಂತ್ರೀಕರಣ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ರೈತರಿಗೆ ಟ್ರ್ಯಾಕ್ಟರ್(45HP ವರೆಗೆ), ಪವರ್ ಟಿಲ್ಲರ್ ಗಳ ಜೊತೆಗೆ ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಶಕ್ತಿ ಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಶಕ್ತಿ ಚಾಲಿತ ಅಂತರ ಬೇಸಾಯ ಉಪಕರಣಗಳು, ಕೊಯ್ಲು ಮತ್ತು ಸಂಸ್ಕರಣಾ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು,

ಡೀಸೆಲ್ ಪಂಪ್‌ಸೆಟ್ ಗಳು ಇತ್ಯಾದಿ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುತ್ತಿದೆ. ಹೀಗೆ ಉಳುಮೆಯಿಂದ ಕೊಯ್ಲಿನವರೆಗೆ ಹಾಗು ಕೊಯ್ಲು ನಂತರ ಉಪಯುಕ್ತವಾಗುವ ವಿವಿಧ ನಮೂನೆಯ ಕೃಷಿ ಉಪಕರಣಗಳನ್ನು ಸಹಾಯಧನದಡಿ ರೈತರಿಗೆ ಒದಗಿಸಲಾಗುತ್ತಿದೆ.

18. **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿಯ ವಿಸ್ತರಣೆ ಹಾಗೂ ಜನಪ್ರಿಯಗೊಳಿಸುವ ಕಾರ್ಯಕ್ರಮ (RKVY-IFS):** ಕೃಷಿ ಮತ್ತು ಕೃಷಿ ಸಂಬಂಧಿತ ಚಟುವಟಿಕೆಗಳಾದ ತೋಟಗಾರಿಕೆ ಹಾಗೂ ಪಶುಸಂಗೋಪನೆಗಳನ್ನು ಒಗ್ಗೂಡಿಸಿ "ಸಮಗ್ರ ಕೃಷಿ ಪದ್ಧತಿ "ಮೂಲಕ ರೈತನ ಆದಾಯ ಹೆಚ್ಚಳ ಮಾಡುವುದು ಹಾಗೂ ಅಳವಡಿಸಿದ ಪ್ರದೇಶದಲ್ಲಿ/ ಜಮೀನಿನಲ್ಲಿ ಬೆಳೆ ಉತ್ಪಾದಕತೆ, ಸುಸ್ಥಿರತೆ, ಸಮತೋಲನಾ ಆಹಾರ ಉತ್ಪಾದನೆ, ತ್ಯಾಜ್ಯಗಳ ಮರುಬಳಕೆ ಹಾಗೂ ವರ್ಷಪೂರ್ತಿ ಆದಾಯ ಹೆಚ್ಚಿಸುವ ಉದ್ದೇಶದಿಂದ ಸಮಗ್ರ ಕೃಷಿ ಪದ್ಧತಿ ಮಾದರಿಗಳ ಅನುಷ್ಠಾನಕ್ಕೆ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆಯಾಗಿ 2400 ಸಮಗ್ರ ಕೃಷಿ ಪದ್ಧತಿ ಮಾದರಿಗಳನ್ನು ಅನುಷ್ಠಾನಗೊಳಿಸಲು ಕಾರ್ಯಕ್ರಮವನ್ನು ರೂಪಿಸಿದ್ದು ಅದರಂತೆ ಅನುಷ್ಠಾನ ಮಾಡಲಾಗುತ್ತಿದೆ.

19. **ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ-ಎಣ್ಣೆಕಾಳು (NMEO-Oilseeds):** ಈ ಯೋಜನೆಯಡಿ ಎಣ್ಣೆಕಾಳುಗಳ ಉತ್ಪಾದನೆಯನ್ನು ಹೆಚ್ಚಿಸಲು ನೂತನ/ಸುಧಾರಿತ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಪೀಡೆನಾಶಕಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ, ಕೃಷಿ ಉಪಕರಣಗಳು ಹಾಗೂ ನೀರು ಒದಗಿಸುವ ಪೈಪುಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೇ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಪ್ರತಿ ಕ್ವಿಂಟಾಲ್ ಬಿತ್ತನೆ ಬೀಜೋತ್ಪಾದನೆಗೆ ರೂ.2500/-ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

20. **ಬೆಳೆ ವೈವಿಧ್ಯತೆ ಕಾರ್ಯಕ್ರಮ (Crop Diversification Programme-CDP):** ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಬೆಳೆ ವೈವಿಧ್ಯತೆ ಕಾರ್ಯಕ್ರಮದಡಿ (Crop Diversification Programme) ತಂಬಾಕು ಬೆಳೆಗೆ ಪರ್ಯಾಯ ಬೆಳೆ ಕಾರ್ಯಕ್ರಮವನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ ಸಹಯೋಗದೊಂದಿಗೆ ಅನುಮೋದಿತ ಕ್ರಿಯಾ ಯೋಜನೆಯನ್ವಯ ಪ್ರಾತ್ಯಕ್ಷಿತೆಗಳು, ಸಮಗ್ರ ಕೃಷಿ ಪದ್ಧತಿಗಳು, ಕೃಷಿ ಹೊಂಡ ನಿರ್ಮಾಣ, ಹಸಿರೆಲೆ ಗೊಬ್ಬರ ಬೀಜ ವಿತರಣೆಗೆ ಶೇಕಡ 50ರ ರಿಯಾಯಿತಿಯಲ್ಲಿ ಸಹಾಯಧನ ನೀಡುವುದರ ಜೊತೆಗೆ ರೈತರಿಗೆ ತರಬೇತಿ ಕಾರ್ಯಕ್ರಮಗಳ ಆಯೋಜನೆ ಹಾಗೂ ತೋಟಗಾರಿಕೆ ಇಲಾಖೆಯಡಿ ಯಂತ್ರೋಪಕರಣಗಳ ಬಳಕೆ ಹಾಗೂ ಮೌಲ್ಯವರ್ಧನೆ ಕಾರ್ಯಕ್ರಮಗಳನ್ನು ಬೆಳಗಾವಿ, ಹಾಸನ ಮತ್ತು ಮೈಸೂರು ಜಿಲ್ಲೆಗಳಲ್ಲಿ ಅನುಷ್ಠಾನ ಮಾಡಲಾಗುತ್ತಿದೆ. ರೈತರನ್ನು ತಂಬಾಕು ಬೆಳೆಯ ಬದಲು ಪರ್ಯಾಯ ಬೆಳೆ ಬೆಳೆಸಲು ಪ್ರೋತ್ಸಾಹಿಸುವುದು ಹಾಗೂ ರೈತರ ಆದಾಯ ಹೆಚ್ಚಿಸಲು ಕೃಷಿ ಜೊತೆಗೆ ಇತರೆ ಆದಾಯ ನೀಡುವ ಚಟುವಟಿಕೆಗಳನ್ನು ಅಳವಡಿಸಲು ಪ್ರೇರೇಪಿಸುವ ಉದ್ದೇಶದೊಂದಿಗೆ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತದೆ.

21. **ಕೃಷಿ ವಿಸ್ತರಣೆ ಉಪ ಅಭಿಯಾನ (Sub Mission on Agriculture Extension-SMAE):** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರಿ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು

ಅನುಷ್ಠಾನ ಮಾಡಲಾಗುತ್ತದೆ. ಯೋಜನೆಯಡಿ ಆಯೋಜಿಸುವ ವಿಸ್ತರಣಾ ಕಾರ್ಯಕ್ರಮಗಳಲ್ಲಿ ಎಲ್ಲಾ ವರ್ಗದ ರೈತರು / ರೈತ ಮಹಿಳೆಯರ ಪಾಲ್ಗೊಳ್ಳುವಿಕೆ ಅವಕಾಶವಿರುತ್ತದೆ.

22. **ಮಣ್ಣು ಆರೋಗ್ಯ ಮತ್ತು ಫಲವತ್ತತೆ ಯೋಜನೆ (Soil Health & Fertility-SHF):** ಮಣ್ಣು ಮಾದರಿಗಳನ್ನು ಸಂಗ್ರಹಣೆ, ವಿಶ್ಲೇಷಣೆ ಮತ್ತು ಮಣ್ಣು ಆರೋಗ್ಯ ಚೀಟಿಗಳ ವಿತರಣೆ. ಇಲಾಖೆಯ ಮಣ್ಣು ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ ಮತ್ತು NABL recognition ಕೈಗೊಳ್ಳಲಾಗುವುದು. ರಸಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳ NABL ಅಕ್ರಿಡಿಟೇಷನ್ ಕೈಗೊಳ್ಳಲಾಗುವುದು. ಜಲಾನಯನ ಅಭಿವೃದ್ಧಿ ಇಲಾಖೆವತಿಯಿಂದ ಅಂತರ್ ಬಸಿಗಾಲುವೆ ಕಾಲುವೆಗಳ ಮೂಲಕ ಸಮಸ್ಯಾತ್ಮಕ ಮಣ್ಣುಗಳ ಉಪಚಾರ ಮಾಡಲಾಗುವುದು.

23. **ರೈತ ಕರೆ ಕೇಂದ್ರ:** ಕೃಷಿ ಇಲಾಖೆಯ 'ರೈತ ಕರೆ ಕೇಂದ್ರ'ವನ್ನು ಆಗಸ್ಟ 2023 ರಲ್ಲಿ ಮಾನ್ಯ ಕೃಷಿ ಸಚಿವರು ಉದ್ಘಾಟಿಸಿದ್ದು,ಈ ಕೇಂದ್ರವು ಪ್ರಸ್ತುತ ಬೆಂಗಳೂರಿನ ಕೃಷಿ ಆಯುಕ್ತಾಲಯದಲ್ಲಿ ಕಾರ್ಯನಿರ್ವಹಿಸುತ್ತಿದೆ. ಲ್ಯಾಂಡ್‌ಲೈನ್ ಮತ್ತು ಎಲ್ಲಾ ಟೆಲಿಕಾಂ ನೆಟ್‌ವರ್ಕ್‌ಗಳ ಮೊಬೈಲ್ ಸಂಖ್ಯೆಗಳ ಮೂಲಕ 09.00 A.M ನಿಂದ 07.00 P.M. ವರೆಗೆ ಒಂದೇ ರಾಜ್ಯ-ವ್ಯಾಪಿ ಟೋಲ್-ಫ್ರೀ ಸಂಖ್ಯೆ 1800-425-3553 ಅನ್ನು ಡಯಲ್ ಮಾಡುವ ಮೂಲಕ ಕರೆ ಕೇಂದ್ರಕ್ಕೆ ಕರೆ ಮಾಡಬಹುದು. ಪ್ರಸ್ತುತ PM-KISAN, ಬೆಳೆ ವಿಮೆ ಮತ್ತು ಬೆಳೆ ಸಮೀಕ್ಷೆ ಕುರಿತಾಗಿನ ಕರೆಗಳು ಹೆಚ್ಚಿನ ಸಂಖ್ಯೆಯಲ್ಲಿ ಸ್ವೀಕೃತವಾಗುತ್ತಿವೆ. ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿನ ತಂತ್ರಜ್ಞಾನಗಳು ಮತ್ತು ಸೇವೆಗಳಿಗೆ ಸಂಬಂಧಿಸಿದ ರೈತರ ಪ್ರಶ್ನೆಗಳಿಗೆ ಒಂದೇ ಸಹಾಯವಾಣಿಯನ್ನು ಒದಗಿಸುವುದು. ಭಾರತ ಸರ್ಕಾರ ಮತ್ತು ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ಸರ್ಕಾರಗಳ ವಿವಿಧ ಚಾಲ್ತಿಯಲ್ಲಿರುವ ಯೋಜನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಒದಗಿಸುವುದು. ಈ ಕೇಂದ್ರಗಳ ಮೂಲಕ ಸುಧಾರಿತ ಕಾಲ್‌ಸೆಂಟರ್ ತಂತ್ರಜ್ಞಾನಗಳನ್ನು ಬಳಸಿಕೊಂಡು ಸುಧಾರಿತ ಬೇಸಾಯ ಕ್ರಮಗಳು ಸೇರಿದಂತೆ ನಿಯತಕಾಲಿಕ ಮತ್ತು ನಿಯತಕಾಲಿಕವಲ್ಲದ ಕೃಷಿ ಮಾಹಿತಿ/ ಸಲಹೆಗಳನ್ನುಒದಗಿಸುವುದು ಕರೆ ಕೇಂದ್ರದ ಮುಖ್ಯ ಉದ್ದೇಶವಾಗಿರುತ್ತದೆ. ಕರೆ ಕೇಂದ್ರ ಪ್ರಾರಂಭದಿಂದ ಒಟ್ಟು 165725 ಕರೆಗಳು ಸ್ವಿಕೃತವಾಗಿದ್ದು ಸದರಿ ಕರೆಗಳನ್ನು ವಿಲೆಗೊಳಿಸಿದೆ.

24. **ಕರ್ನಾಟಕ ರೈತ ಸಮೃದ್ಧಿ ಯೋಜನೆ:** ಕೃಷಿ ಕ್ಷೇತ್ರವನ್ನು ಸುಸ್ಥಿರ ಹಾಗೂ ಲಾಭದಾಯಕವಾಗಿಸಲು ರಾಜ್ಯದಲ್ಲಿ ಪ್ರಸ್ತುತ ಕೃಷಿ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಕೃಷಿ ಭಾಗ್ಯ ಯೋಜನೆಯ ಫಲಾನುಭವಿಗಳನ್ನು ಕೇಂದ್ರ ಬಿಂದುವಾಗಿರಿಸಿಕೊಂಡು ವಿವಿಧ ರೈತಪರ ಯೋಜನೆಗಳನ್ನು ಸಂಯೋಜಿಸುವ ಮೂಲಕ, ರೈತ ಮತ್ತು ರೈತ ಗುಂಪುಗಳಿಗೆ ಗುಣಮಟ್ಟದ ಉತ್ಪಾದನೆ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ರಫ್ತು ಮಾಡುವುದರ ಬಗ್ಗೆ ಸಾಮರ್ಥ್ಯ ಅಭಿವೃದ್ಧಿ ಹಾಗೂ ಅರಿವು ಮೂಡಿಸುವುದು. ರೈತರಿಗೆ ಮಣ್ಣು ಪರೀಕ್ಷೆಯ ಆಧಾರದ ಮೇಲೆ ಯಾವ ಬೆಳೆ ಬೆಳೆಯಬೇಕೆಂಬ ಕುರಿತು ಹಾಗೂ ಮಾರುಕಟ್ಟೆ ಬೇಡಿಕೆಯನ್ನು ಆಧರಿಸಿ ಮಾರ್ಗದರ್ಶನ ನೀಡುವುದು ಇತ್ಯಾದಿಗಳ ಮೂಲಕ ಆಹಾರ ಉತ್ಪಾದನೆ ಹಾಗೂ ರೈತರ ಆದಾಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸಮಗ್ರ ಕೃಷಿ ಪದ್ಧತಿ ಘಟಕದಡಿ ಸಾಮಾನ್ಯ ವರ್ಗದ ರೈತರಿಗೆ ಶೇ.50ರ ಸಹಾಯಧನ ಹಾಗೂ ಪ.ಜಾ/ಪ.ಪಂ ವರ್ಗದ ರೈತರಿಗೆ ಶೇ.90ರ ಸಹಾಯಧನ ನೀಡಲಾಗುತ್ತದೆ.

25. **ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (PMFME):** ವ್ಯಕ್ತಿಗತ ಕಿರು ಉದ್ದಿಮೆಗಳಿಗೆ ಬೆಂಬಲ, ರೈತ ಉತ್ಪಾದಕರ ಸಂಸ್ಥೆಗಳು/ ಉತ್ಪಾದಕ ಸೊಸೈಟಿಗಳಿಗೆ ಸಹಾಯಧನ, ಸ್ವಸಹಾಯ ಸಂಘಗಳ ಸದಸ್ಯರಿಗೆ ಕಾರ್ಯ ನಿರ್ವಹಣಾ ಬಂಡವಾಳ ಹಾಗೂ ಪರಿಕರಗಳ ಖರೀದಿಗೆ ಪ್ರಾಥಮಿಕ ಬಂಡವಾಳ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆಗೆ ಬೆಂಬಲ, ರಾಜ್ಯದ ತಾಂತ್ರಿಕ ಸಂಸ್ಥೆಗಳಲ್ಲಿ ಆಹಾರ ಸಂಸ್ಕರಣಾ ಉದ್ಯಮಿಗಳಿಗೆ ತರಬೇತಿ ನೀಡಲು ಹಾಗೂ ಪ್ರಾಯೋಗಿಕ ಉತ್ಪಾದನೆ ಕೈಗೊಳ್ಳಲು ಇನ್ ಕ್ಯುಬೇಷನ್ ಕೇಂದ್ರಗಳ ಸ್ಥಾಪನೆಗೆ ಅನುದಾನವನ್ನು

ನೀಡಲಾಗುವುದು. KAPPEC ಸಂಸ್ಥೆಯು ಈ ಯೋಜನೆಯ ಅನುಷ್ಠಾನಕ್ಕೆ ನೋಡಲ್ ಇಲಾಖೆಯಾಗಿರುತ್ತದೆ.

ಅಸಂಘಟಿತ ವಲಯದಲ್ಲಿರುವ ಸೂಕ್ಷ್ಮ/ ಕಿರು ಆಹಾರ ಸಂಸ್ಕರಣ ಉದ್ದಿಮೆಗಳನ್ನು ಪ್ರೋತ್ಸಾಹಿಸಿ ಅವುಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಮತ್ತು ಅವುಗಳನ್ನು ಸಂಘಟಿತ ವಲಯಕ್ಕೆ ತರುವುದು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಸ್ವಸಹಾಯ ಸಂಘಗಳು ಹಾಗೂ ಉತ್ಪಾದಕ ಸಹಕಾರಿ ಸಂಘಗಳಿಗೆ ಅವುಗಳ ಸರಪಳಿಕೊಂಡಿಯೊಂದಿಗೆ ಉತ್ತೇಜನ ನೀಡಲಾಗುತ್ತಿದೆ. ಯೋಜನೆಯ ಅನುಷ್ಠಾನದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು 60:40ರ ಅನುಪಾತದಲ್ಲಿ ಇದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರವು ಶೇ.35ರಷ್ಟು ಹಾಗೂ ರಾಜ್ಯ ಸರ್ಕಾರವು PMFME ಯೋಜನೆಯಡಿಯಲ್ಲಿ ಶೇ.15 ರಷ್ಟು ಹೆಚ್ಚುವರಿ ಸಹಾಯಧನವನ್ನು ನೀಡಲಾಗುತ್ತಿದೆ.

# ಅನುಬಂಧ - ಜಿ

## ಪ್ರಸಕ್ತ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ರಾಜ್ಯದ ರೈತರಿಗೆ ವಿವಿಧ ಯೋಜನೆಗಳಡಿ ನೀಡಲಾಗುತ್ತಿರುವ ಯೋಜನಾವಾರು ಸೌಲಭ್ಯಗಳು ಹಾಗೂ ಮಾನದಂಡಗಳ ವಿವರ(LCQ-995)

| ಕ್ರ. ಸಂ | ಯೋಜನೆಯ ಹೆಸರು | ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು | ಅನುಷ್ಠಾನ ಜಿಲ್ಲೆಗಳು | ಯೋಜನಾ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳು |
|---|---|---|---|---|
| 1 | ಜಲಾನಯನ ಅಭಿವೃದ್ಧಿ ಘಟಕ-ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ 2.0 (WDC-PMKSY 2.0) | ಸಮರ್ಥ ನೀರು ಕೊಯ್ಲು, ಮಣ್ಣಿನ ತೇವಾಂಶ ಸಂರಕ್ಷಣೆ, ಪರ್ಯಾಯ ಬೆಳೆ ವ್ಯವಸ್ಥೆಗಳು, ಕೃಷಿ ಅರಣ್ಯ, ಖುಷ್ಕಿ ತೋಟಗಾರಿಕೆ, ಪಶುಸಂಗೋಪನೆಯ ಮೂಲಕ ಹವಾಮಾನ/ವೈಪರೀತ್ಯ ಮತ್ತು ಬರಗಾಲದ ಅಪಾಯಗಳನ್ನು ಎದುರಿಸುವುದು ಮತ್ತು ರೈತರ ಆದಾಯವನ್ನು ಭದ್ರಪಡಿಸುವುದು; ಯೋಜನಾ ಪ್ರದೇಶಗಳಲ್ಲಿ ನೈಸರ್ಗಿಕ ಸಂಪನ್ಮೂಲಗಳ ಸಮರ್ಥನೀಯ ಬಳಕೆಯ ಮೂಲಕ ಬೆಳೆಗಳು, ಜಾನುವಾರು, ಮೀನುಗಾರಿಕೆ, ಹಾಗೂ ಉತ್ಪಾದನಾ ವ್ಯವಸ್ಥೆಗಳ ಮೂಲಕ ಉತ್ಪಾದಕತೆಯನ್ನು ಸುಧಾರಿಸುವುದು; ಆಸ್ತಿ ರಹಿತ ರೈತರನ್ನು ಗುರುತಿಸುವುದು ಮತ್ತು ಪರ್ಯಾಯ ಜೀವನೋಪಾಯದ ಅವಕಾಶಗಳನ್ನು ಉತ್ತೇಜಿಸುವುದು; ಸುಲಭವಾದ ಕೈಗೆಟುಕುವ ತಂತ್ರಜ್ಞಾನಗಳ ಉತ್ತೇಜನ ಮಾಡುವುದು; ಆದಾಯವನ್ನು ಉತ್ಪಾದಿಸುವ ಅವಕಾಶಗಳಿಗೆ ಹೆಚ್ಚಿನ ಉತ್ತೇಜನ ನೀಡುವುದು ಹಾಗೂ ರೈತ ಉತ್ಪಾದಕರ ಸಂಸ್ಥೆಗಳನ್ನು ರಚಿಸುವುದು/ಬಲವರ್ಧಿಸುವುದು.<br><br>ಸಮತಟ್ಟಾದ ಪ್ರದೇಶದ ಜಲಾನಯನ ಚಟುವಟಿಕೆಗಳ ಅನುಷ್ಠಾನಕ್ಕೆ ರೂ. 22,000 ಪ್ರತಿ ಹೆಕ್ಟೇರ್ | ರಾಜ್ಯದ ಎಲ್ಲಾ 30 ಜಿಲ್ಲೆಗಳು<br>ಬಾಗಲಕೋಟೆ, ಬಳ್ಳಾರಿ, ಬೆಳಗಾವಿ, ಬೆಂಗಳೂರು(ಗ್ರಾ), ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರ್ಗಿ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ | • ಸದರಿ ಪ್ರದೇಶದಲ್ಲಿ ಕುಡಿಯುವ ನೀರಿನ ಅಭಾವ ತೀವ್ರತೆ.<br>• ಅಂತರ್ಜಲ ಸಂಪನ್ಮೂಲಗಳ ಮಿತಿಮೀರಿದ ಬಳಕೆ ಪ್ರಮಾಣ.<br>• ಬಂಜರು ಪ್ರದೇಶಗಳು/ಸವಕಳಿಯಾದ ಪ್ರದೇಶಗಳು ಹೆಚ್ಚಾಗಿರುವುದು.<br>• ಈಗಾಗಲೇ ಅಭಿವೃದ್ಧಿಯಾಗಿರುವ/ಉಪಚರಿಸಿರುವ ಇನ್ನೊಂದು ಜಲಾನಯನದ ಸಮೀಪದಲ್ಲಿ ಇರುವುದು.<br>• ಸ್ವ ಇಚ್ಛಾ ವಂತಿಗೆಗಳನ್ನು ನೀಡುವುದಕ್ಕೆ ಹಾಗೂ ಸೃಜಿಸಲಾದ ಆಸ್ತಿಗಳನ್ನು ನಿರ್ವಹಣೆ ಮಾಡುವುದಕ್ಕೆ ಇರುವ ಗ್ರಾಮ ಸಮುದಾಯದ ಒಪ್ಪಿಗೆ ಇರಬೇಕು.<br>• ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅನುಪಾತ.<br>• ಯೋಜನಾ ಪ್ರದೇಶವು ಖಾತ್ರಿ ನೀರಾವರಿಯ ವ್ಯಾಪ್ತಿಗೆ ಒಳಪಡಬಾರದು.<br>• ಭೂಮಿಯ ಉತ್ಪಾದಕತೆ ಸಾಮರ್ಥ್ಯ ಕಡಿಮೆಯಾಗಿರುವುದು. |

| ಕ್ರ. ಸಂ | ಯೋಜನೆಯ ಹೆಸರು | ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು | ಅನುಷ್ಠಾನ ಜಿಲ್ಲೆಗಳು | ಯೋಜನಾ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳು |
|---|---|---|---|---|
| | | ಗೆ, ಮರುಭೂಮಿ ಮತ್ತು ಗುಡ್ಡ ಗಾಡು ಪ್ರದೇಶದಲ್ಲಿ ಜಲಾನಯನ ಚಟುವಟಿಕೆಗಳ ಅನುಷ್ಠಾನಕ್ಕೆ ರೂ. 28,000 ಪ್ರತಿ ಹೆಕ್ಟೇರ್ ಗೆ ಅನುದಾನವನ್ನು ಒದಗಿಸಲಾಗುತ್ತದೆ. | ಕನ್ನಡ, ಉಡುಪಿ, ದಕ್ಷಿಣ ಕನ್ನಡ, ವಿಜಯಪುರ, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳು | ಈ ಮೇಲಿನ ಮಾನದಂಡಗಳ ಪ್ರಕಾರ ಆಯ್ಕೆಯಾದ ಜಲಾನಯನ ಯೋಜನಾ ಪ್ರದೇಶದ ವ್ಯಾಪ್ತಿಯ ಎಲ್ಲಾ ರೈತರು ಮತ್ತು ಆಸ್ತಿರಹಿತ ಕೂಲಿ ಕಾರ್ಮಿಕರು ಯೋಜನೆಯ ಫಲಾನುಭವಿಗಳಾಗಿರುತ್ತಾರೆ. |
| 2 | ಮಳೆ ಆಧಾರಿತ ಪ್ರದೇಶದ ಅಭಿವೃದ್ಧಿ (RAD-RKVY RAFTAAR) | ರೈತರ ಜಮೀನಿನಲ್ಲಿ ವಿವಿಧ ಮಾದರಿಯ ಸಮಗ್ರ ಕೃಷಿ ಪದ್ಧತಿಗಳನ್ನು ಹಾಗೂ ಮೌಲ್ಯವರ್ಧಿತ ಚಟುವಟಿಕೆಗಳನ್ನು ಅಳವಡಿಸಿಕೊಳ್ಳುವಂತೆ ಉತ್ತೇಜಿಸುವುದು; ರೈತರಿಗೆ ಸಮಗ್ರ ಕೃಷಿ ಪದ್ಧತಿಗಳಾದ ಸಮಗ್ರ ಕೃಷಿ ಪದ್ಧತಿಯಡಿ ಬೆಳೆಗಳು (ರಾಗಿ ಬೆಳೆಗಳು / ಎಣ್ಣೆಬೀಜಗಳು/ ದ್ವಿದಳ ಧಾನ್ಯಗಳು/ತರಕಾರಿಗಳು/ಮೇವು) + ಮರಗಳು (ತೋಟಗಾರಿಕೆ/ ಕೃಷಿ ಅರಣ್ಯ)+ ಜಾನುವಾರುಗಳು ಹಾಲು ಹಸುಗಳು / ಎಮ್ಮೆಗಳು / ಸಣ್ಣ ಮೆಲುಕು ಹಾಕುವ ಪ್ರಾಣಿಗಳು (10 ಪ್ರಾಣಿಗಳು (ಕುರಿ ಅಥವಾ ಮೇಕೆ ಅಥವಾ ಹಂದಿಗಳು) / 50 ಪಕ್ಷಿಗಳು (ಬಾತುಕೋಳಿ) ಅಳವಡಿಸಲು ಉತ್ತೇಜಿಸುವುದು. ಮೌಲ್ಯವರ್ಧನೆ ಚಟುವಟಿಕೆಗಳಾದ ಮೀನುಗಾರಿಕೆ, ಜೇನುಕೃಷಿ, ಸೈಲೇಜ್ ತಯಾರಿಕ ಘಟಕ ಮತ್ತು ಎರೆಹುಳುಗೊಬ್ಬರ ಘಟಕಗಳನ್ನು ಇತರೆ ಯೋಜನೆಗಳೊಂದಿಗೆ ಒಗ್ಗೂಡಿಸುವುದು. | ಬಾಗಲಕೋಟೆ, ಬಳ್ಳಾರಿ, ಬೆಳಗಾವಿ, ಬೆಂಗಳೂರು(ಗ್ರಾ), ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರ್ಗಿ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ವಿಜಯಪುರ, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳು | 1. ಗುಚ್ಛ ಗ್ರಾಮ (Cluster village) ಆಧಾರದ ಮೇಲೆ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗುತ್ತಿದೆ. ಫಲಾನುಭವಿ ರೈತರು ಗುಚ್ಛಗ್ರಾಮದವರಾಗಿರಬೇಕು<br>2. ಒಂದು ಗುಚ್ಛವು ಕನಿಷ್ಠ 20 ಹೆಕ್ಟೇರ್ ಅಥವಾ ಹೆಚ್ಚಿನ ಕ್ಷೇತ್ರವನ್ನು ಒಂದು ಗುಚ್ಛವೆಂದು (Cluster) ಪರಿಗಣಿಸಲಾಗುತ್ತದೆ.<br>3. ಸದರಿ ಯೋಜನೆಯಡಿ ಪರಿಷ್ಕೃತ ಮಾರ್ಗಸೂಚಿಯನ್ವಯ ಅರ್ಹ ಪ್ರತಿ ಕೃಷಿ ಕುಟುಂಬಕ್ಕೆ ರೂ. 30,000/- ಆರ್ಥಿಕ ಸಹಾಯವನ್ನು ನೀಡಲಾಗುವುದು.<br>4. ರಾಜ್ಯದ ಎಲ್ಲಾ ವರ್ಗದ ರೈತರು ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಬಹುದಾಗಿದೆ. |
| 3 | ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆ | ರಾಜ್ಯದ 25 ಜಿಲ್ಲೆಗಳ ಸುಮಾರು 25 ಲಕ್ಷ ಹೆ. ಮಳೆಯಾಶ್ರಿತ ಪ್ರದೇಶದಲ್ಲಿ ವೈಜ್ಞಾನಿಕ ವಿಧಾನದಲ್ಲಿ ವಿವಿಧ ತಾಂತ್ರಿಕ ಪಾಲುದಾರ ಸಂಸ್ಥೆಗಳ ಮೂಲಕ ಭೂ- | ಚಾಮರಾಜನಗರ, ದಾವಣಗೆರೆ, ತುಮಕೂರು, ಕೊಪ್ಪಳ, | REWARD ಯೋಜನೆಯಡಿಯ ಕಾರ್ಯಕ್ರಮಗಳನ್ನು ಕೈಗೊಳ್ಳುವ ಜಲಾನಯನ ಪ್ರದೇಶ ವ್ಯಾಪ್ತಿಗೆ ಒಳಪಡುವ |

| ಕ್ರ. ಸಂ | ಯೋಜನೆಯ ಹೆಸರು | ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು | ಅನುಷ್ಠಾನ ಜಿಲ್ಲೆಗಳು | ಯೋಜನಾ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳು |
|---|---|---|---|---|
| | | ಸಂಪನ್ಮೂಲ ಸಮೀಕ್ಷೆ (Land Resource Inventory-LRI) ಮತ್ತು ಜಲವಿಜ್ಞಾನ ಅಧ್ಯಯನ (Hydrology) ಕೈಗೊಂಡು ಮಣ್ಣಿನ ಭೌತಿಕ ಹಾಗೂ ರಾಸಾಯನಿಕ ಗುಣಧರ್ಮಗಳ ದತ್ತಾಂಶ ಸಂಗ್ರಹಿಸಿ ಡಿಜಿಟಲ್ ಗ್ರಂಥಾಲಯ ಮತ್ತು ಭೂ-ಸಂಪನ್ಮೂಲ ಪೋರ್ಟಲ್‌ನಲ್ಲಿ ಅಳವಡಿಸಲಾಗುತ್ತದೆ.<br>ಯೋಜನಾ ಪ್ರದೇಶದ ಜಲಾನಯನಗಳಲ್ಲಿ ವೈಜ್ಞಾನಿಕವಾಗಿ ಸಂಗ್ರಹಿಸಿದ ಭೂ-ಸಂಪನ್ಮೂಲ ಮತ್ತು ಜಲ-ವಿಜ್ಞಾನ ಅಧ್ಯಯನದ ದತ್ತಾಂಶಗಳನ್ನು ಮತ್ತು ಶಿಫಾರಸ್ಸುಗಳನ್ನು ಆಧರಿಸಿ ಯೋಜನಾ ವ್ಯಾಪ್ತಿಯ ಅಂದಾಜು 1.00 ಲಕ್ಷ ಹೆ. ಜಲಾನಯನ ಪ್ರದೇಶದಲ್ಲಿ (20 ಉಪ-ಜಲಾನಯನಗಳು) ಜಲಾನಯನ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಯೋಜನಾ ವರದಿ ತಯಾರಿಸಿ ಸಂಪೂರ್ಣ ಜಲಾನಯನವನ್ನು ಉಪಚರಿಸಲಾಗುತ್ತದೆ. ಭೂರಹಿತರ ಜೀವನೋಪಾಯಕ್ಕಾಗಿ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ನೆರವು ನೀಡಲಾಗುತ್ತದೆ. | ಕಲಬುರಗಿ, ಯಾದಗಿರಿ, ಗದಗ, ಬೀದರ್, ವಿಜಯಪುರ, ಚಿಕ್ಕಮಗಳೂರು, ರಾಯಚೂರು, ಹಾವೇರಿ, ಧಾರವಾಡ, ಬೆಳಗಾವಿ, ಬಾಗಲಕೋಟೆ, ಶಿವಮೊಗ್ಗ, ಚಿತ್ರದುರ್ಗ, ಚಿಕ್ಕಬಳ್ಳಾಪುರ, ಕೋಲಾರ, ಹಾಸನ ಜಿಲ್ಲೆಗಳು | ರೈತರು ಯೋಜನೆಯ ವಿವಿಧ ಘಟಕಗಳ ಫಲಾನುಭವಿಗಳಾಗಿರುತ್ತಾರೆ. |
| 4 | ನಬಾರ್ಡ್ ಆರ್.ಐ.ಡಿ.ಎಫ್ (ಟ್ರಾಂಚೆ-27) ನೆರವಿನ ಜಲಾನಯನ ಅಭಿವೃದ್ಧಿ ಯೋಜನೆಗಳು | ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಯೋಜನಾ ಪ್ರದೇಶದ 10 ಯೋಜನೆಗಳ ಮೇಲ್ ಸ್ತರಗಳಲ್ಲಿ ಬೋಲ್ಡರ್ ತಡೆ ಹಾಗೂ ರಬಲ್ ತಡೆಗಳನ್ನು ನಿರ್ಮಿಸಲಾಗುವುದು ಕೆಳ ಸ್ತರಗಳಲ್ಲಿ ವೈಜ್ಞಾನಿಕವಾಗಿ ಸೂಕ್ತವಾದ ಸಮುದಾಯ ಮತ್ತು ನಾಲಾ ಪ್ರದೇಶದ ಸ್ಥಳಗಳಲ್ಲಿ ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳಾದ ತಡೆ ಅಣೆ, ಕಿಂಡಿ ಅಣೆ, ನಾಲಾ ಬದು, ಗೋಕಟ್ಟೆ ಮತ್ತು ಇತ್ಯಾದಿ ಸ್ಥಳ ಸೂಕ್ತತೆಗೆ ಅನುಸಾರ ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ವಿನ್ಯಾಸಗಳನ್ನು ರಚಿಸಲಾಗುತ್ತದೆ. | ಬೆಳಗಾವಿ, ಚಾಮರಾಜನಗರ, ಚಿಕ್ಕಬಳ್ಳಾಪುರ, ಹಾವೇರಿ, ಕೋಲಾರ, ಶಿವಮೊಗ್ಗ, ಚಿಕ್ಕಮಗಳೂರು, ದಾವಣಗೆರೆ, ಹಾಸನ ಮತ್ತು ಕೊಪ್ಪಳ ಜಿಲ್ಲೆಗಳು | ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳ ಅಕ್ಕಪಕ್ಕದಲ್ಲಿರುವ ಎಲ್ಲಾ ರೈತರು ಯೋಜನೆಯ ಫಲಾನುಭವಿಗಳಾಗಿರುತ್ತಾರೆ. |

<table>
<tr><th>ಕ್ರ. ಸಂ</th><th>ಯೋಜನೆಯ ಹೆಸರು</th><th>ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು</th><th>ಅನುಷ್ಠಾನ ಜಿಲ್ಲೆಗಳು</th><th>ಯೋಜನಾ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳು</th></tr>
<tr><td></td><td colspan="3">ಇತರೆ ಇಲಾಖೆಯ ಅನುದಾನದಿಂದ ಅನುಷ್ಠಾನ ಗೊಳಿಸಲಾಗುತ್ತಿರುವ ಕಾರ್ಯಕ್ರಮಗಳು :</td><td></td></tr>
<tr><td>5</td><td>ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ - ಇತರೆ ಉಪಚಾರಗಳು (PMKSY - OI)</td><td>ಈ ಯೋಜನೆಯಡಿ ಸೂಕ್ಷ್ಮ ನೀರಾವರಿ ಘಟಕಗಳನ್ನು ಅಳವಡಿಸಿಕೊಂಡಿರುವ ಆಸಕ್ತ ರೈತರಿಗೆ ಈ ಕೆಳಕಂಡ ಚಟುವಟಿಕೆಗಳನ್ನು ಸಬ್ಸಿಡಿ/ರಿಯಾಯಿತಿ ದರದಲ್ಲಿ ರೂ. 75,000/- ಗಳ ಮಿತಿಗೆ ಒಳಪಟ್ಟು ಅನುಷ್ಠಾನ ಮಾಡಲಾಗುತ್ತಿದೆ.
<table>
<tr><th>ಕ್ರ. ಸಂ</th><th>ಚಟುವಟಿಕೆ</th><th>ಸಬ್ಸಿಡಿ/ರಿಯಾಯಿತಿ</th></tr>
<tr><td>1</td><td>ವೈಯಕ್ತಿಕ ನೀರು ಸಂಗ್ರಹಣಾ ವಿನ್ಯಾಸಗಳು (ಕೃಷಿ ಹೊಂಡ)</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.75,000/-</td></tr>
<tr><td>2</td><td>ಅಂತರ್ಜಲ ಸುರಕ್ಷಿತ ತಾಲ್ಲೂಕುಗಳಲ್ಲಿ ಬೋರ್ ವೆಲ್ ಅಥವಾ ಟ್ಯೂಬ್ ವೆಲ್ (ಅಲ್ಪಾ/ಮಧ್ಯಮ ಆಳ)</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.25,000/-</td></tr>
<tr><td>3</td><td>ಸಣ್ಣ ಬಾವಿಗಳ ಮರುಸ್ಥಾಪನೆ ಅಥವಾ ನವೀಕರಣ</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.15,000/-</td></tr>
<tr><td>4</td><td>ಸ್ಥಗಿತಗೊಂಡಿರುವ ಕೊಳವೆ ಬಾವಿಗಳ ಮರುಪೂರಣ</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.5,000/-</td></tr>
<tr><td>5</td><td>ಪೈಪು/ಪ್ರಿ-ಕಾಸ್ಟ್ ವಿತರಣಾ ವ್ಯವಸ್ಥೆ</td><td>ಪ್ರತಿ ಹೆಕ್ಟೇರ್‌ಗೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.10,000/-</td></tr>
<tr><td>6</td><td>ನೀರೆತ್ತುವ ಸಾಧನಗಳು (ವಿದ್ಯುತ್, ಡೀಸೆಲ್, ಪವನ ಮತ್ತು ಸೌರ)</td><td>ಅ) ಪ್ರತಿ ವಿದ್ಯುತ್/ಡೀಸೆಲ್ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.15,000/-<br>ಆ) ಪ್ರತಿ ಪವನ/ಸೌರ ಘಟಕಕ್ಕೆ ಒಟ್ಟು ವೆಚ್ಚದ</td></tr>
</table></td><td>ರಾಜ್ಯದ ಎಲ್ಲಾ 30 ಜಿಲ್ಲೆಗಳು<br>ಬಾಗಲಕೋಟೆ, ಬಳ್ಳಾರಿ, ಬೆಳಗಾವಿ, ಬೆಂಗಳೂರು(ಗ್ರಾ), ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರ್ಗಿ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ವಿಜಯಪುರ, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳು</td><td>ಕೃಷಿ/ತೋಟಗಾರಿಕೆ/ರೇಷ್ಮೆ ಇಲಾಖೆ ಮೂಲಕ ಸೂಕ್ಷ್ಮ ನೀರಾವರಿ ಘಟಕಗಳನ್ನು ಅಳವಡಿಸಿಕೊಂಡಿರುವ ರೈತರು ಈ ಯೋಜನೆಯ ಫಲಾನುಭವಿಗಳು</td></tr>
</table>

| ಕ್ರ. ಸಂ | ಯೋಜನೆಯ ಹೆಸರು | ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು | ಅನುಷ್ಠಾನ ಜಿಲ್ಲೆಗಳು | ಯೋಜನಾ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳು |
|---|---|---|---|---|
| | | <table><tr><td></td><td></td><td>ಶೇ.50 ಅಥವಾ ಗರಿಷ್ಠ ರೂ.50,000/-</td></tr><tr><td>7</td><td>ಪೆಟ್ರೋಲ್ ನೀರಾವರಿ ಪಂಪ್ ಸೆಟ್-15hp ವರೆಗೆ</td><td>ಪ್ರತಿ ಘಟಕಕ್ಕೆ ಒಟ್ಟು ವೆಚ್ಚದ ಶೇ.50 ಅಥವಾ ಗರಿಷ್ಠ ರೂ.10,000/-</td></tr></table> | | |
| 6 | ಅಟಲ್ ಭೂಜಲ್ ಯೋಜನೆ | ಅಟಲ್ ಭೂಜಲ್ ಯೋಜನಾ ವ್ಯಾಪ್ತಿಯಲ್ಲಿ (14 ಜಿಲ್ಲೆಗಳ 41 ತಾಲ್ಲೂಕುಗಳ 1199 ಗ್ರಾಮಪಂಚಾಯಿತಿಗಳಲ್ಲಿ) ಆಯ್ಕೆಯಾಗಿರುವ ತೀವ್ರ ಅಂತರ್ಜಲ ಕೊರತೆ ಎದುರಿಸುವಂತಹ ಗ್ರಾಮಪಂಚಾಯತಿಗಳಲ್ಲಿ ಚಟುವಟಿಕೆಗಳನ್ನು ಆದ್ಯತೆ ಮೇರೆಗೆ ಕೈಗೊಳ್ಳುವುದು ಹಾಗೂ ಸದರಿ ಗ್ರಾಮಪಂಚಾಯತಿಗಳ ವ್ಯಾಪ್ತಿಗೆ ಬರುವ ರೈತರು ಫಲಾನುಭವಿಗಳಾಗಿರುತ್ತಾರೆ. | ಬಾಗಲಕೋಟೆ, ಬೆಳಗಾವಿ, ಬೆಂಗಳೂರು(ಗ್ರಾ), ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಗದಗ, ಹಾಸನ, ಕೋಲಾರ, ರಾಮನಗರ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳು | • ಅಟಲ್ ಭೂಜಲ್ ಯೋಜನಾ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕುಗಳ ಆಯ್ಕೆಗೊಂಡಿರುವ ಗ್ರಾಮಪಂಚಾಯತಿಗಳಲ್ಲಿ ನೀರು ಕೊಯಿಲು ರಚನೆ ಮತ್ತು ಸಂರಕ್ಷಣೆ ಚಟುವಟಿಕೆಗಳನ್ನು ಆಧ್ಯತೆ ಮೇರೆಗೆ ಕೈಗೊಳ್ಳುವುದು.<br>• ಚಾಲ್ತಿಯಲ್ಲಿರುವ / ಮುಂದುವರೆದ ಪುನಚ್ಛೇತನ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿರುವುದಿಲ್ಲ. ಹೊಸ ಕಾಮಗಾರಿಗಳನ್ನು ಮಾತ್ರ ಕೈಗೊಳ್ಳುವುದು.<br>• ನೀರು ಸಂರಕ್ಷಣೆ ರಚನೆ ಸ್ಥಳ ಆಯ್ಕೆಯ ಮಾಹಿತಿಯನ್ನು ಜಿಲ್ಲಾ ಪ್ರಾಯೋಜನೆ ಉಸ್ತುವಾರಿ ಘಟಕದಿಂದ ಅನುಮೋದನೆಗೊಂಡಿರಬೇಕು.<br>• ಅಟಲ್ ಭೂಜಲ ಯೋಜನೆಯ ರಾಜ್ಯ ಕಾರ್ಯಕ್ರಮ ನಿರ್ವಹಣಾ ಘಟಕ (SPMU) ದಿಂದ ಕ್ರಿಯಾ ಯೋಜನೆ ಅನುಮೋದನೆಯಾಗಿರಬೇಕು. |
| 7 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ತಡೆಅಣೆ ನಿರ್ಮಾಣ ಕಾರ್ಯಕ್ರಮ | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ತಡೆ/ಕಿಂಡಿಅಣೆಯನ್ನು ಪ್ರಮುಖವಾಗಿ ಸಮುದಾಯ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗುತ್ತಿದ್ದು, ನಾಲೆಯ ಎರಡೂ ಬದಿಗಳಲ್ಲಿ ಜಮೀನು ಹೊಂದಿರುವ ರೈತರು ಮುಖ್ಯ ಫಲಾನುಭವಿಗಳಾಗುತ್ತಾರೆ. | ಬೆಳಗಾವಿ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಹಾಸನ, ಕೊಡಗು, ಶಿವಮೊಗ್ಗ, | • ಲಭ್ಯವಿರುವ ಹಳ್ಳಗಳಲ್ಲಿ ಮತ್ತು ಸ್ಥಳಸೂಕ್ತತೆ ಅನುಸಾರ ತಡೆಅಣೆಗಳನ್ನು ನಿರ್ಮಿಸಲಾಗುವುದು.<br>• ಹರಿದು ಹೋಗುವ ನೀರನ್ನು ತಡೆಗಟ್ಟಿ ಭೂಮಿಯಲ್ಲಿ ಇಂಗುವಂತೆ ಮಾಡಲು |

| ಕ್ರ. ಸಂ | ಯೋಜನೆಯ ಹೆಸರು | ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು | ಅನುಷ್ಠಾನ ಜಿಲ್ಲೆಗಳು | ಯೋಜನಾ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳು |
|---|---|---|---|---|
| | | | ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳು | ಜಲಾನಯನ ಕ್ಷೇತ್ರವು 25 ಹೆಕ್ಟರ್ ಮೇಲ್ಪಟ್ಟು 250 ಹೆಕ್ಟರ್ ವರೆಗೆ ಇರುವಂತಹ ಸ್ಥಳವನ್ನು ಆಯ್ಕೆ ಮಾಡಲಾಗುವುದು.<br>• ರಚನಾ ಸ್ಥಳದಿಂದ ಮೇಲಿನ ಬದಿಗೆ ಹಳ್ಳವು ಕನಿಷ್ಟ 50ಮೀ. ರವರೆಗೆ ನೇರವಾಗಿದ್ದು ಕಡಿದಾದ ಪ್ರಪಾತಗಳು ಹಾಗೂ ಕೆಳಬದಿಗೆ 20 ಮೀ. ಅಂತರದವರೆಗೆ ತೀವ್ರ ತಿರುವುಗಳು ಇರಬಾರದು.<br>• ತಡೆ ಅಣೆ ನಿರ್ಮಿಸುವ ಸ್ಥಳದಲ್ಲಿ ಹಳ್ಳವು ಕನಿಷ್ಟ 2 ಮೀ. ಆಳ ಇರಬೇಕು. |
| 8 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ನೀರು ಕೊಯ್ಲು ರಚನೆಗಳು | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ನೀರು ಕೊಯ್ಲು ರಚನೆಯನ್ನು ಪ್ರಮುಖವಾಗಿ ಸಮುದಾಯ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗುತ್ತಿದ್ದು, ನಾಲೆಯ ಎರಡೂ ಬದಿಗಳಲ್ಲಿ ಜಮೀನು ಹೊಂದಿರುವ ರೈತರು ಮುಖ್ಯ ಫಲಾನುಭವಿಗಳಾಗುತ್ತಾರೆ. | **ರಾಜ್ಯದ ಎಲ್ಲಾ 30 ಜಿಲ್ಲೆಗಳು**<br>ಬಾಗಲಕೋಟೆ, ಬಳ್ಳಾರಿ, ಬೆಳಗಾವಿ, ಬೆಂಗಳೂರು(ಗ್ರಾ), ಬೀದರ್, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರ್ಗಿ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, | • ಲಭ್ಯವಿರುವ ಹಳ್ಳಗಳಲ್ಲಿ ಮತ್ತು ಸ್ಥಳಸೂಕ್ತತೆ ಅನುಸಾರ ನೀರು ಕೊಯ್ಲು ರಚನೆಗಳನ್ನು ನಿರ್ಮಿಸಲಾಗುವುದು.<br>• ಹರಿದು ಹೋಗುವ ನೀರನ್ನು ತಡೆಗಟ್ಟಿ ಭೂಮಿಯಲ್ಲಿ ಇಂಗುವಂತೆ ಮಾಡಲು ಜಲಾನಯನ ಕ್ಷೇತ್ರವು 25 ಹೆಕ್ಟರ್ ಮೇಲ್ಪಟ್ಟು 250 ಹೆಕ್ಟರ್ ವರೆಗೆ ಇರುವಂತಹ ಸ್ಥಳವನ್ನು ಆಯ್ಕೆ ಮಾಡಲಾಗುವುದು.<br>• ರಚನಾ ಸ್ಥಳದಿಂದ ಮೇಲಿನ ಬದಿಗೆ ಹಳ್ಳವು ಕನಿಷ್ಟ 50ಮೀ. ರವರೆಗೆ ನೇರವಾಗಿದ್ದು ಕಡಿದಾದ ಪ್ರಪಾತಗಳು ಹಾಗೂ ಕೆಳಬದಿಗೆ 20 ಮೀ. ಅಂತರದವರೆಗೆ ತೀವ್ರ ತಿರುವುಗಳು ಇರಬಾರದು.<br>• ತಡೆ ಅಣೆ ನಿರ್ಮಿಸುವ ಸ್ಥಳದಲ್ಲಿ ಹಳ್ಳವು ಕನಿಷ್ಟ 2 ಮೀ. ಆಳ ಇರಬೇಕು. |

| ಕ್ರ. ಸಂ | ಯೋಜನೆಯ ಹೆಸರು | ರೈತರಿಗೆ ಒದಗಿಸುತ್ತಿರುವ ಸೌಲಭ್ಯಗಳು | ಅನುಷ್ಠಾನ ಜಿಲ್ಲೆಗಳು | ಯೋಜನಾ ಅನುಷ್ಠಾನದಲ್ಲಿ ಅನುಸರಿಸುವ ಮಾನದಂಡಗಳು |
|---|---|---|---|---|
| | | | ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ವಿಜಯಪುರ, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳು | |
| 9 | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ | ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ ಕಾರ್ಯಕ್ರಮದಡಿ ಸವಳು ಜವಳು ಬಾಧಿತ ಪ್ರದೇಶದಲ್ಲಿ ಒಟ್ಟಾರೆ ಪ್ರದೇಶವನ್ನು ಗುಚ್ಛ ಮಾದರಿಯಲ್ಲಿ (contiguous area) ಉಪಚರಿಸಲು ಅನುಕೂಲವಾಗುವಂತೆ ಆ ವಿಸ್ತಾರ ಪ್ರದೇಶದ ರೈತರುಗಳನ್ನು ಫಲಾನುಭವಿಗಳನ್ನಾಗಿ ಆಯ್ಕೆ ಮಾಡಲಾಗುತ್ತದೆ. ಫಲಾನುಭವಿ ರೈತರು ಮಣ್ಣಿನ ಉಪಚಾರ ಮತ್ತು ಬೆಳೆ ಶಿಫಾರಸ್ಸಿನ ಅನ್ವಯ ಬೇಸಾಯ ಕ್ರಮಗಳನ್ನು ಪಾಲಿಸುವ ಮನೋಭಾವ ಉಳ್ಳವರಾಗಿರಬೇಕು. | ಬೆಳಗಾವಿ, ಬಾಗಲಕೋಟೆ ಮತ್ತು ಚಿತ್ರದುರ್ಗ ಜಿಲ್ಲೆಗಳು | ಆಯ್ದ ಜಿಲ್ಲೆಗಳ ತಾಲ್ಲೂಕುಗಳಲ್ಲಿ ಸವಳು-ಜವಳು ಬಾಧಿತ ಗ್ರಾಮಗಳನ್ನು ಗುರುತಿಸಿ ಅಕ್ಕ-ಪಕ್ಕದ ಜಮೀನುಗಳು ಹೊಂದಿಕೊಂಡಂತೆ ಗುಚ್ಛ ಮಾದರಿಯಲ್ಲಿ ಉಪಚಾರ ಉದ್ದೇಶಿತ ಪ್ರದೇಶವನ್ನು ಆಯ್ಕೆ ಮಾಡಿಕೊಳ್ಳಲಾಗುವುದು. ಸವಳು-ಜವಳು ಬಾದಿತ ಜಮೀನಿನಲ್ಲಿ ಅಂತರ ಬಸಿ ಕಾಲುವೆ ಮೂಲಕ ಮಣ್ಣಿನಲ್ಲಿರುವ ಹೆಚ್ಚಿನ ಲವಣಾಂಶವನ್ನು ಹೊರಹಾಕಿ ಮಣ್ಣಿನ ಗುಣಧರ್ಮವನ್ನು ಕಾಪಾಡುವ ಉಪಚಾರವನ್ನು (ಕಪ್ಪು ಮಣ್ಣಿನಲ್ಲಿ ಅಂದಾಜು ರೂ.1.25 ಲಕ್ಷ ಮತ್ತು ಕೆಂಪು ಮಣ್ಣಿನಲ್ಲಿ ಅಂದಾಜು ರೂ.0.65 ಲಕ್ಷ ಪ್ರತಿ ಹೆಕ್ಟೇರಿಗೆ) ಕೈಗೊಳ್ಳಲಾಗುವುದು. |